**ಅಸಲು ದಾವಾ ಸಂಖ್ಯೆ:244/2018 ಪಿ.ಡಬ್ಲ್ಯೂ: 1**

**ಸಾಕ್ಷಿಯು ದಿನಾಂಕ 13.07.2023 ರಂದು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣವಚನ ನೀಡಲಾಯಿತು.**

**ಮುಖ್ಯ ವಿಚಾರಣೆ: ಶ್ರೀ.ಟಿ.ಕೆ.ಆರ್.ಜಿ ನ್ಯಾಯವಾದಿಗಳಿಂದ:**

ನಾನು ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆಯ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಅದನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಸತ್ಯವಾಗಿವೆ, ಅದರಲ್ಲಿರುವ ಅಂಶಗಳನ್ನು ಅರ್ಥೈಸಿಕೊಂಡ ನಂತರ ನಾನು ಅದಕ್ಕೆ ಸಹಿ ಮಾಡಿರುತ್ತೇನೆ.

ವಂಶವೃಕ್ಷವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ದಾವಾ ಆಸ್ತಿ ಸಂಖ್ಯೆಗೆ ಸಂಬಂಧಿಸಿದ ಒಟ್ಟು 2 ಗಣಕೀಕೃತ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ಕ್ರಮವಾಗಿ ನಿಪಿ-2 ಮತ್ತು 3 ಎಂದು ಗುರುತಿಸಲಾಯಿತು. ದಿ: 05.09.2018 ರ ಕಛೇರಿಯ ನೋಟೀಸ್ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-4 ಎಂದು ಗುರುತಿಸಲಾಯಿತು. 3 ಅಂಚೆ ರಶೀದಿ ಮತ್ತು 2 ಅಂಚೆ ಸ್ವಿಕೃತಿಯನ್ನು ಹಾಜರುಪಡಿಸಿರುತ್ತೇನೆ. ಅವುಗಳನ್ನು ನಿಪಿ-5 ರಿಂದ 9 ಎಂದು ಗುರುತಿಸಲಾಯಿತು. ದಿ: 19.09.2018 ರ ಪ್ರತ್ಯುತ್ತರ ನೋಟೀಸನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಪಿ-10 ಎಂದು ಗುರುತಿಸಲಾಯಿತು.

ಪಾಟಿ ಸವಾಲಿಗೆ ಸಮಯ ಕೋರಿದ್ದು, ಸಮಯ ನೀಡಲಾಯಿತು.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)

**ಸಾ . ಹೇ . ಬಿ. ಮಾಡಿಸಲಾಯಿತು.**
**ಓ.ಹೇ.ಕೇ.ಸ.ಇದೆ**

ಅಪರ ಸಿವಿಲ್ ನ್ಯಾಯಾಧೀಶರು
**ನಾಗಮಂಗಲ**